ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಯಡಿ ಅಫಜಲ್‌ಪುರ ತಾಲ್ಲೂಕಿನಲ್ಲಿ ಈವರೆಗೆ 119.48 ಕಿ.ಮೀ. ಉದ್ದದ 10 ರಸ್ತೆ ಕಾಮಗಾರಿಗಳನ್ನು ರೂ.24.94 ಕೋಟಿ ವೆಚ್ಚದಲ್ಲಿ ಕೈಗೊಳ್ಳಲಾಗಿದೆ.

ಶ್ರೀ ಮಾಲೀಕಯ್ಯ ವಿ.ಗುತ್ತೇದಾರ್ : ಮಾನ್ಯ ಅಧ್ಯಕ್ಷರೆ, ಮಾನ್ಯ ಸಚಿವರ ಉತ್ತರ ಸಮರ್ಪಕವಾಗಿದೆ. ಅದರ ಬಗ್ಗೆ ನನ್ನದೇನೂ ತಕರಾರು ಇಲ್ಲ. ಸುಮ್ಮನೆ ಟೈಮ್‌ವೇಸ್ಟ್ ಮಾಡುವುದು ಬೇಡ. ಆದರೆ ಒಂದೇ ಒಂದು clarification ಕೇಳಬಯಸುತ್ತೇನೆ. ಯಾವ್ಯಾವ ಕಾಮಗಾರಿಗಳಿಗೆ ಯಾವಾಗ ಟೆಂಡರ್ ಕರೆಯಲಾಗಿದೆ? ಅವುಗಳು ಯಾವಾಗ ಮುಗಿಯುತ್ತವೆ? ಎಂಬ ಬಗ್ಗೆ ದಯವಿಟ್ಟು ಮಾನ್ಯ ಸಚಿವರು ಮಾಹಿತಿ ಕೊಡಬೇಕೆಂದು ಕೋರುತ್ತೇನೆ.

ಶ್ರೀ ಜಗದೀಶ್ ಶೆಟ್ಟರ್ : ಮಾನ್ಯ ಅಧ್ಯಕ್ಷರೆ, ಮಾನ್ಯ ಸದಸ್ಯರು ಉತ್ತರ ಸಮರ್ಪಕವಾಗಿದೆ ಎಂದು ಹೇಳಿದರು. ಟೆಂಡರ್ ಅನ್ನು ಕೆಳಗಿನ ಹಂತದಲ್ಲಿ ಕರೆದಿರುತ್ತಾರೆ. ಅದರ ಪ್ರತಿಯೊಂದು details ನಮಗೆ ಬಂದಿರುವುದಿಲ್ಲ. ಆ ಮಾಹಿತಿಯನ್ನು ಸಂಬಂಧಪಟ್ಟವರಿಂದ ಪಡೆದುಕೊಂಡು ಮಾನ್ಯ ಸದಸ್ಯರಿಗೆ ಕಳುಹಿಸಿಕೊಡುತ್ತೇನೆ.

ಅಧ್ಯಕ್ಷರು : ಆಯಿತು. ಈಗ ಮುಂದಿನ ಪ್ರಶ್ನೆ ಮಾನ್ಯ ತುಕಾರಾಮ್‌ರವರದು.

ಸಂಡೂರು ತಾಲ್ಲೂಕಿನಲ್ಲಿ ಖಾಲಿ ಇರುವ ಪಶು ವೈದ್ಯಾಧಿಕಾರಿಗಳ ಬಗ್ಗೆ :

120 (800) ಶ್ರೀ ತುಕಾರಾಮ್.ಇ (ಸಂಡೂರ್) : ಮಾನ್ಯ ಪಶುಸಂಗೋಪನಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸಂಡೂರು ತಾಲ್ಲೂಕಿನಲ್ಲಿ ಪಶುವೈದ್ಯಾಧಿಕಾರಿಗಳ ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಈ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ರೇವುನಾಯಕ್ ಬೆಳಮಗಿ (ಮಾನ್ಯ ಪಶುಸಂಗೋಪನಾ ಸಚಿವರು) :

ಅ) ಹೌದು

ಆ) ವಿಶೇಷ ನೇಮಕಾತಿ ನಿಯಮ ರಚಿಸಿ, ಆ ಮೂಲಕ ಪಶುವೈದ್ಯಾಧಿಕಾರಿಗಳನ್ನು ನೇರ ನೇಮಕಾತಿ ಮಾಡಿಕೊಳ್ಳುವ ಪ್ರಸ್ತಾವನೆ

ಪರಿಗಣನೆಯಲ್ಲಿದೆ. ನೇಮಕಾತಿ ಸಂದರ್ಭದಲ್ಲಿ ಸಂಡೂರು ತಾಲ್ಲೂಕಿನಲ್ಲಿ ಖಾಲಿ ಇರುವ ಪಶುವೈದ್ಯಾಧಿಕಾರಿ ಹುದ್ದೆಗಳನ್ನು ಆದ್ಯತೆ ಮೇರೆಗೆ ತುಂಬಲು ಕ್ರಮ ಕೈಗೊಳ್ಳಲಾಗುವುದು.

ಪ್ರಶ್ನೆ ಸಂಖ್ಯೆ : 120 (800)

ಶ್ರೀ ಇ. ತುಕಾರಾಮ್ : ಮಾನ್ಯ ಅಧ್ಯಕ್ಷರೆ, ಮಾನ್ಯ ಸಚಿವರು ಉತ್ತರವನ್ನು ಒದಗಿಸಿದ್ದಾರೆ. ಇದನ್ನು ನಾವು ಗಮನಿಸಿದಾಗ ಪಶು ಸಂಗೋಪನಾ ವೈದ್ಯಾಧಿಕಾರಿಗಳ approval ಆದ ಗ್ರೂಪ್–ಬಿ 10 ಹುದ್ದೆಗಳು ಮಾತ್ರ ಇದ್ದು, ಅದರಲ್ಲಿ 2 ಹುದ್ದೆಗಳು ಮಾತ್ರ ಭರ್ತಿಯಾಗಿವೆ.

ಕೂಡಲೆ ಸರ್ಕಾರ ಉಳಿದ 8 ಹುದ್ದೆಗಳನ್ನು ಭರ್ತಿ ಮಾಡಬೇಕೆಂದು ಕೇಳಿಕೊಳ್ಳುತ್ತಿದ್ದೇವೆ. ಇವತ್ತಿನ ದಿವಸ ನಮ್ಮ ಬಳ್ಳಾರಿ ತಾಲ್ಲೂಕಿನಾದ್ಯಂತ ಸುಮಾರು ಸಾವಿರಕ್ಕೂ ಹೆಚ್ಚು ಕುರಿಗಳು ನೀಲಿಬಾಯಿ ರೋಗ ಬಂದು ಸಾವನ್ನಪ್ಪಿವೆ. ಈ ರೀತಿ ಸಿಬ್ಬಂದಿಯ ಕೊರತೆ ಇರುವುದರಿಂದ ಕುರಿಗಳಿಗೆಲ್ಲಾ ತೊಂದರೆಯಾಗಿದೆ, ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಸರ್ಕಾರದಲ್ಲಿ ನಾನು ಒತ್ತಾಯ ಮಾಡುತ್ತೇನೆ.

ಶ್ರೀ ರೇವು ನಾಯಕ್ ಬೆಳಮಗಿ : ಸನ್ಮಾನ್ಯ ಅಧ್ಯಕ್ಷರೆ, ಸಂಡೂರು ತಾಲ್ಲೂಕಿನಲ್ಲಿ ಪಶು ವೈದ್ಯಾಧಿಕಾರಿಗಳ ಹುದ್ದೆ ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ಎಂದು ಕೇಳಿದ್ದಾರೆ, ಬಂದಿದೆ ಎಂದು ಹೇಳಲಾಗಿದೆ. ಈ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನೆಂದು ಕೇಳಿದ್ದಾರೆ, ವಿಶೇಷ ನೇಮಕಾತಿ ನಿಯಮ ರಚಿಸಿ ನಿಯಮದ ಪ್ರಕಾರ ಪಶು ವೈದ್ಯಾಧಿಕಾರಿಗಳನ್ನು ನೇರ ನೇಮಕಾತಿ ಮಾಡಿಕೊಳ್ಳುವ ಪ್ರಸ್ತಾವನೆ ಪರಿಗಣನೆಯಲ್ಲಿದೆ, ನೇಮಕಾತಿ ಸಂದರ್ಭದಲ್ಲಿ ಸಂಡೂರು ತಾಲ್ಲೂಕಿನಲ್ಲಿ ಖಾಲಿಯಿರುವ ಪಶುವೈದ್ಯಾಧಿಕಾರಿ ಹುದ್ದೆಗಳನ್ನು ಆದ್ಯತೆಯ ಮೇರೆಗೆ ತುಂಬಲು ಕ್ರಮ ಕೈಗೊಳ್ಳುತ್ತೇವೆ.

ಶ್ರೀ ತುಕಾರಾಂ : ಕುರಿಗಳಿಗೆ ನೀಲಿಬಾಯಿ ರೋಗ ಬಂದಿರುವು ದರಿಂದ ಸಾವಿರಾರು ಕುರಿಗಳು ಸತ್ತಿದ್ದಾವೆ, ಆ ಬಗ್ಗೆ ಲಿಖಿತ ರೂಪದಲ್ಲಿ ವರದಿಯನ್ನು ಕೊಟ್ಟಿದ್ದಾರೆ, ಅದನ್ನು ಇಲ್ಲವೆಂದು ಹೇಳುತ್ತಿದ್ದಾರೆ, ಇದನ್ನು ಪರಿಶೀಲನೆ ಮಾಡಿ ಬಂದಾಗ ಅವರಿಗೆ ಗೊತ್ತಾಗುತ್ತಿದೆ, ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಸರ್ಕಾರವನ್ನು ಒತ್ತಾಯಿಸುತ್ತೇನೆ.

ಶ್ರೀ ಸುನಿಲ್ ವಿ. ಹೆಗ್ಡೆ : ಇದು ಎಲ್ಲಾ ಕಡೆಯ ಸಮಸ್ಯೆಯಾಗಿದೆ, ನಮ್ಮ ಜೋಯಿಡಾ ತಾಲ್ಲೂಕಿನಲ್ಲಿ ಒಬ್ಬರೇ ಇದ್ದಾರೆ, ಈ ರೀತಿ ಸಮಸ್ಯೆಯಾದಾಗ ರೈತರೆಲ್ಲಾ ತೊಂದರೆಗೆ ಸಿಕ್ಕಿಬೀಳುತ್ತಾರೆ.

ಶ್ರೀ ರೇವುನಾಯಕ್ ಬೆಳಮಗಿ : ಕೊರತೆಯಿರುವುದನ್ನು ಕೂಡ ಪರಿಶೀಲಿಸಿ ಕ್ರಮಕೈಗೊಳ್ಳುತ್ತೇವೆ.

ಅಧ್ಯಕ್ಷರು : ವಸಂತ ಬಂಗೇರದವರದು ಇಲ್ಲ, ಮುಂದಿನ ಪ್ರಶ್ನೆ ಸುನಿಲ್ ವಿ. ಹೆಗ್ಡೆಯವರು.

ಉತ್ತರ ಕನ್ನಡ ಜಿಲ್ಲೆಯ ಹಳಿಯಾಳ ತಾಲ್ಲೂಕಿನ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವ ಬಗ್ಗೆ :

710 ಶ್ರೀ ಸುನೀಲ್ ವಿ.ಹೆಗಡೆ (ಹಳಿಯಾಳ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಉತ್ತರ ಕನ್ನಡ ಜಿಲ್ಲೆಯ ಹಳಿಯಾಳ ತಾಲ್ಲೂಕಿಗೆ ಕಾಳಿ ನದಿಯಿಂದ ಶಾಶ್ವತ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಈ ಶಾಶ್ವತ ಕುಡಿಯುವ ನೀರಿನ ಯೋಜನೆಗಾಗಿ ಸರ್ಕಾರ ಅಂದಾಜು ಪಟ್ಟಿಯನ್ನು ತಯಾರಿಸಲಾಗಿದೆಯೇ;

ಇ) ಹಾಗಿದ್ದಲ್ಲಿ, ಅಂದಾಜು ಪಟ್ಟಿಗೆ ಸರ್ಕಾರ ಆಡಳಿತಾತ್ಮಕ ಅನುಮೋದನೆಯನ್ನು ನೀಡಿದೆಯೇ;

ಈ) ಹಾಗಿದ್ದಲ್ಲಿ, ಈ ಯೋಜನೆಗೆ ಸರ್ಕಾರ ಈವರೆಗೆ ಬಿಡುಗಡೆ ಮಾಡಿರುವ ಅನುದಾನದ ಮೊತ್ತ ಎಷ್ಟು;

ಉ) ಈ ಯೋಜನೆಯನ್ನು ತ್ವರಿತವಾಗಿ ಪೂರ್ಣಗೊಳಿಸಲು ಸರ್ಕಾರ ಕಾಲಮಿತಿಯನ್ನೇನಾದರೂ ವಿಧಿಸಿದೆಯೇ; ಹಾಗಿದ್ದಲ್ಲಿ, ಯೋಜನೆಯನ್ನು ಎಂದು ಪೂರ್ಣಗೊಳಿಸಲಾಗುವುದು (ವಿವರಗಳನ್ನು ನೀಡುವುದು)?

ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು) :

ಅ) ಇಲ್ಲ

ಆ) ಉದ್ಭವಿಸುವುದಿಲ್ಲ